## ಇಂಡಿಯಾ ಫೌಂಡೇಶನ್ ಫಾರ್ ದಿ ಆರ್ಟ್ಸ್

# ಕರ್ನಾಟಕ ಸರ್ಕಾರಿ ಶಾಲೆಗಳ ಶಿಕ್ಷಕ/ ಶಿಕ್ಷಕಿಯರಿಂದ ಯೋಜನಾ ಪ್ರಸ್ತಾವನೆಗಳನ್ನು ಆಹ್ವಾನಿಸಿದೆ

**ಪ್ರಸ್ತಾವನೆಗಳನ್ನು ಸಲ್ಲಿಸಲು ಕಡೆಯ ದಿನಾಂಕ: 10th December, 2021**

ಇಂಡಿಯಾ ಫೌಂಡೇಶನ್ ಫಾರ್ ದಿ ಆರ್ಟ್ಸ್ (ಐ.ಎಫ್.ಎ) ಕರ್ನಾಟಕದ ಸರ್ಕಾರಿ ಶಾಲೆಗಳಲ್ಲಿ ಕಲಾ ಶಿಕ್ಷಣ ಯೋಜನೆಗಳನ್ನು ಕಾರ್ಯಗತಗೊಳಿಸಲು ಶಾಲಾ ಶಿಕ್ಷಕ/ ಶಿಕ್ಷಕಿಯರಿಂದ ಯೋಜನಾ ಪ್ರಸ್ತಾವನೆಗಳನ್ನು ಆಹ್ವಾನಿಸಿದೆ. ಇದು ಈಗಾಗಲೇ ಚಾಲ್ತಿಯಲ್ಲಿರುವ 'ಕಲಿ-ಕಲಿಸು' ಯೋಜನೆಯ ಮುಂದುವರಿಕೆ ಭಾಗವಾಗಿದೆ. ಶಿಕ್ಷಕರು, ಶಾಲಾ ಸಮುದಾಯ ಹಾಗೂ ಸ್ಥಳೀಯ ಕಲಾವಿದರ ಸಂಬಂಧವನ್ನು ಗಟ್ಟಿಗೊಳಿಸುವುದು ಈ ಯೋಜನೆಗಳ ಮುಖ್ಯ ಗುರಿ.

ಈ ಯೋಜನೆಗಳ ಮುಖ್ಯ ಉದ್ದೇಶವೆಂದರೆ ಶಿಕ್ಷಕರು ತಮ್ಮ ವಿಷಯದ ಪರಿಮಿತಿಯ ಚೌಕಟ್ಟನ್ನು ದಾಟಿ, ಕಲಾ ಅಂತರ್ಗತ ಕಲಿಕೆಯ ಸಾಧ್ಯತೆಗಳನ್ನು ಕಂಡುಕೊಳ್ಳುವುದು. ಈ ಮೂಲಕ ಎಲ್ಲಾ ವಿಷಯಗಳ ಪಠ್ಯಕ್ರಮದಲ್ಲಿ ಹಾಗೂ ತರಗತಿಯಲ್ಲಿ ಸ್ಥಳೀಯ ಕಲಾಪ್ರಕಾರಗಳನ್ನು ಅಳವಡಿಸಿಕೊಂಡು ಹೊಸ ಕಲಿಕೆಯ ಅವಕಾಶವನ್ನು ಕಲ್ಪಿಸುವುದು. ಅದರ ಜೊತೆಗೆ ಪರಿಸರ ಹಾಗೂ ಜಾನಪದ ಸಂಸ್ಕೃತಿಯನ್ನು ಶಾಲಾ ಶಿಕ್ಷಣದಲ್ಲಿ ಮತ್ತೆ ಪರಿಚಯ ಮಾಡುವುದು. ಯೋಜನೆಗಳ ಅವಧಿಯ ನಂತರವೂ ಯೋಜನಾಕಾರ್ಯಕ್ರಮವು ಮುಂದುವರೆಯಬಹುದಾದ ಎಲ್ಲಾ ಸಾಧ್ಯತೆಗಳನ್ನು ಐ.ಎಫ್.ಎ ನಿರೀಕ್ಷಿಸುತ್ತದೆ.

ಕಳೆದ ವರ್ಷಗಳ ಯೋಜನೆಗಳ ಬಗ್ಗೆ ಮಾಹಿತಿ ಮಾಡೆಯಲು ಈ ಲಿಂಕ್ ಒತ್ತಿ:
https://sites.google.com/site/kalikalisu/project/phase-4---2012

## ಈ ಯೋಜನಾ ಪ್ರಸ್ತಾವನೆಗಳನ್ನು ಯಾರು ಸಲ್ಲಿಸಬಹುದು

ಸರ್ಕಾರಿ ಶಾಲಾ ಆಡಳಿತಾಧಿಕಾರಿಗಳು, ಮುಖ್ಯ ಶಿಕ್ಷಕರು, ಬಿ ಆರ್ ಪಿಗಳು, ಸಿ ಆರ್ ಪಿಗಳು, ವಿಷಯ ಶಿಕ್ಷಕರು, ಕಲಾಶಿಕ್ಷಕರು, ಜಿಲ್ಲಾ ಶಿಕ್ಷಣ ತರಬೇತಿ ಕೇಂದ್ರದ(DIET) ಉಪನ್ಯಾಸಕರು.

## ಯೋಜನೆಯ ವ್ಯಾಪ್ತಿ :

ಕಾರ್ಯಗತಗೊಳಿಸುವ ಯೋಜನೆಯಲ್ಲಿ ಕೆಳಕಂಡ ಯಾವುದಾದರೊಂದು ಅಂಶವಿರಬೇಕು.

- ಪೋಷಕರು, ವಿದ್ಯಾರ್ಥಿಗಳು, ಶಿಕ್ಷಕರು, ಕಲಾಸೇವೆಯಲ್ಲಿ ತೊಡಗಿರುವವರೂ ಒಳಗೊಂಡಂತೆ ಇನ್ನೂ ಹಲವು ಪಾಲುದಾರರನ್ನು ಕಲಾ ಯೋಜನೆಯ ಪರಿಧಿಯಲ್ಲಿ ತರಬೇಕು.
- ಭೋದನೆಯಲ್ಲಿ ಸ್ಥಳೀಯ ಹಾಗೂ ಪ್ರಾಂತೀಯ ಕಲಾ ಪ್ರಕಾರಗಳನ್ನು ಬಳಸಿಕೊಳ್ಳುವ ಮೂಲಕ ಕಲಿಕೆಯನ್ನು ಶ್ರೀಮಂತಗೊಳಿಸುವುದು.
- ವಿದ್ಯಾರ್ಥಿ ಕೇಂದ್ರಿತ ಕಲಿಕೆಗೆ ಪ್ರೋತ್ಸಾಹಿಸುವುದು. ಉದಾಹರಣೆಗೆ ವಿದ್ಯಾರ್ಥಿಗಳ ಕಲಾ ಸಂಘಗಳ ಮೂಲಕ ಕಲಾ ಪ್ರಕಾರಗಳನ್ನು ಅಭ್ಯಸಿಸುವುದು. (ರಂಗಭೂಮಿ , ದೃಶ್ಯ ಕಲೆ, ಸಿನಿಮಾ, ಸಾಹಿತ್ಯ, ಛಾಯಾಚಿತ್ರ, ಸಂಗೀತ ಇತ್ಯಾದಿ)
- ಯೋಜನೆಯು ಕಲಾ ಕಲಿಕೆಯ ಮೂಲಕ ಸಾಮಾಜಿಕ ನ್ಯಾಯ ಮತ್ತು ಪರಿಸರ ಸಂಬಂಧಿ ಅರಿವು ಮೂಡಿಸಲು ಶಾಲಾ ಸಮುದಾಯವನ್ನು ಪ್ರೇರೇಪಿಸುವಲ್ಲಿ ಸಹಕಾರಿಯಾಗಬೇಕು.
- ಕರೋನ ಸಾಂಕ್ರಾಮಿಕದ ಮುಂದಿನ ದಿನಗಳಲ್ಲಿ, ಕಲಾ ಅಂತರ್ಗತ ಕಲಿಕೆಯ ನಿರಂತರ ಸಾಧ್ಯತೆಗಳನ್ನು ಶಾಲೆಯಲ್ಲಿ ಪ್ರತಿಪಾದಿಸುವುದು.

ಇನ್ನಿತರ ಅಲ್ಪಾವಧಿ ಅಥವ ದೀರ್ಘಾವಧಿಯ ನೂತನ ಮತ್ತು ಶೃಜನಶೀಲ ಕಲಾ ಶಿಕ್ಷಣ ಯೋಜನೆಗಳನ್ನು ಸಹ ಪರಿಗಣಿಸಲಾಗುವುದು.

## ಯೋಜನಾ ಪ್ರಸ್ತಾವನೆ ಸಲ್ಲಿಸುವ ವಿಧಾನ:

- ಯೋಜನೆಗೆ ಸಂಬಂದಪಟ್ಟ ಪ್ರಶ್ನೆಗಳಿದ್ದಲ್ಲಿ, ನಿಮ್ಮ ಹೊಳಹುಗಳ ಬಗ್ಗೆ ಚರ್ಚಿಸಬಯಸಿದಲ್ಲಿ ಅಥವಾ ನಿಮ್ಮ ಕರಡು ಪ್ರಸ್ತಾವನೆಯನ್ನು ನಮಗೆ ಕಳುಹಿಸ ಬಯಸಿದಲ್ಲಿ, **15th November 2021**ರ ಒಳಗೆ ನಮ್ಮನ್ನು ಸಂಪರ್ಕಿಸಿ.
- ನಿಮ್ಮ ಅಂತಿಮ ಪ್ರಸ್ತಾವನೆಯು ಇಮೇಲ್ ಮೂಲಕ **: 10th December, 2021**ರ ಒಳಗೆ ನಮಗೆ ಸೇರಬೇಕು.
- ಯೋಜನೆಯ ನಿರೀಕ್ಷಿತ ಕಾಲಾವಧಿ ಕನಿಷ್ಠ ಒಂಬತ್ತು ತಿಂಗಳದ್ದಾಗಿರಬೇಕು ಹಾಗೂ ಗರಿಷ್ಟ ೧೮ ತಿಂಗಳ ಅವಧಿಯದ್ದಾಗಿರಬೇಕು.
- ನಿಮ್ಮ ಯೋಜನೆಯನ್ನು ಕನ್ನಡ, ಉರ್ದು, ಹಿಂದಿ, ಮರಾಠಿ, ತೆಲುಗು ಹಾಗು ಇಂಗ್ಲಿಷ್ ಭಾಷೆಯಲ್ಲಿ ಬರೆಯಬಹುದು.
- ನಿಮ್ಮ ಪ್ರಸ್ತಾವನೆ ಆಯ್ಕೆಯಾದಲ್ಲಿ ನಿಗಧಿಪಡಿಸಿದ ದಿನಾಂಕದಂದು ಆನ್ಲೈನ್ ಮೂಲಕ ನಡೆಯುವ ಚರ್ಚೆಗ ತಾವು ಲಭ್ಯವಿರಬೇಕು. (ದಿನಾಂಕವನ್ನು ತಿಳಿಸಲಾಗುವುದು)
- **31st January 2022**ಕ್ಕೆ ಆಯ್ಕೆಯಾದ ಯೋಜನೆಗಳ ಪಟ್ಟಿಯನ್ನು ನಿರೀಕ್ಷಿಸಬಹುದು.

ನಿಮ್ಮ ಯೋಜನೆಯು ಈ ಕೆಳಕಂಡ ವಿಷಯಗಳ ವಿವರಗಳನ್ನು ಒಳಗೊಂಡಿರಬೇಕು.

1. ಯೋಜನೆಯ ಉದ್ದೇಶಗಳು.
2. ನಿಮ್ಮ ಶಾಲೆಯ ಸಂಪೂರ್ಣ ವಿವರ
3. ಕಾರ್ಯ ಯೋಜನೆಗಳ ವಿವರ.
4. ಯೋಜನೆಯಿಂದ ಬರಬಹುದಾದ ಅಪೇಕ್ಷಿತ ಫಲಿತಾಂಶಗಳು.
5. ಯೋಜನೆಯನ್ನು ಕೈಗೊಳ್ಳಲು ವಿನಂತಿ ಪತ್ರ
6. ಖರ್ಚು- ವೆಚ್ಚಗಳ ವಿವರ.

**ಬಜೆಟ್:**

- ಗರಿಷ್ಠ ರೂ. 1,00,000/- ವರೆಗೆ.
- ಅರ್ಜಿದಾರರು ಸಂಪೂರ್ಣ ಬಜೆಟ್‌ಅಲ್ಲಿ ಗರಿಷ್ಠ ೪೦% ಅಷ್ಟು ಗೌರವಧನವನ್ನು ಪರಿಗಣಿಸಬಹುದು. ಖರ್ಚು-ವೆಚ್ಚದ ಲೆಕ್ಕದಲ್ಲಿ ಗೌರವಾಧನವು ಸೇರಿರುತ್ತದೆ ಎಂಬುದನ್ನು ಗಮನಿಸಿ.

**ಯೋಜನೆಯ ಸಲ್ಲಿಕೆ:**

ನಿಮ್ಮ ಅಂತಿಮ ಪ್ರಸ್ತಾವನೆಯು ೨೫ಎಂ.ಬಿಯ ಒಳಗಿದ್ದು, ಇಮೇಲ್ ಮೂಲಕ ಶ್ರೀ ಕೃಷ್ಣಮೂರ್ತಿ ಟಿ ಎನ್, ಹಿರಿಯ ಕಾರ್ಯಕ್ರಮ ಅಧಿಕಾರಿಗಳು, ಕಲಾ ಶಿಕ್ಷಣ ಇವರಿಗೆ krishna@indiaifa.org ಕಳುಹಿಸಿಕೊಡಿ. ನಿಮ್ಮ ಇಮೇಲ್ ವಿಷಯ ಇಂತಿರಲಿ: 'ಕಲಾ ಶಿಕ್ಷಣದಡಿ ಯೋಜನೆಯ ಪ್ರಸ್ತಾವನೆ (ಶಿಕ್ಷಕ/ ಶಿಕ್ಷಕಿಯರು)'

ದೂರವಾಣಿ ಸಂಖ್ಯೆ : 8762954080 (ದಯವಿಟ್ಟು ಸೋಮವಾರದಿಂದ ಶುಕ್ರವಾರದ ಒಳಗೆ ಬೆಳಗ್ಗೆ ೧೦ ರಿಂದ ಸಂಜೆ ೪ರ ಒಳಗೆ ಕರೆ ಮಾಡಿ)

For more information on Kali-Kalisu follow this link:

http://www.indiaifa.org/programmes/arts-education.html